1

23 + 16 + 29 + 59

**ಮಾನ್ಯ ವಿಧಾನಪರಿಷತ್ತಿನ ಸದಸ್ಯರುಗಳಾದ ಶ್ರೀ ಪುಟ್ಟಣ್ಣ, ಶ್ರೀ ಶಶೀಲ್ ಜಿ ನಮೋಶಿ, ಶ್ರೀ ಎಸ್ ವ್ಹಿ ಸಂಕನೂರ ಮತ್ತು ಶ್ರೀ ಎಸ್.ಎಲ್.ಭೋಜೇಗೌಡ ರವರುಗಳು ನಿಯಮ 330ರಡಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ**

**ವಿಷಯ:**

ಖಾಸಗಿ ಅನುದಾನಿತ/ಅನುದಾನರಹಿತ ಶಾಲೆಗಳ ಪ್ರಥಮ ಮಾನ್ಯತೆ ಹಾಗು ಮಾನ್ಯತೆ ನವೀಕರಣಕ್ಕೆ ಸಂಬಂಧಿಸಿದಂತೆ ಇಡಿ/709/ಪಿಜಿಸಿ/2017, ದಿನಾಂಕ:07-03-2018, ಇಡಿ/709/ಪಿಜಿಸಿ /2017, ದಿನಾಂಕ:08-03-2018 ಹಾಗು ಇನ್ನಿತರೆ ಸರ್ಕಾರಿ ಆದೇಶಗಳನ್ನು ಮಾಡಲಾಗಿದೆ. ಈ ಆದೇಶಗಳಂತೆ ಕರ್ನಾಟಕ ಶಿಕ್ಷಣ ಕಾಯ್ದೆ-1983 ಮತ್ತು ಆರ್.ಟಿ.ಇ ನಿಯಮ-2012ರ ಅಡಿಯಲ್ಲಿ ಆನ್‌ಲೈನ್ ಮೂಲಕ ಮಾನ್ಯತೆ ನವೀಕರಣಕ್ಕೆ ಆಡಳಿತ ಮಂಡಳಿಯವರು ಆನ್‌ಲೈನ್ ಮೂಲಕ ಸ್ಕ್ಯಾನ್ ಮಾಡಿ ಸಲ್ಲಿಸಬೇಕೆಂದು ಷರತ್ತು ವಿಧಿಸಲಾಗಿದೆ. ಇದರ ಜೊತೆಗೆ ಆನ್‌ಲೈನ್‌ನಲ್ಲಿ ಇನ್ನಿತರೆ ಹಲವಾರು ದಾಖಲೆಗಳನ್ನು ಸಲ್ಲಿಸುವಂತೆ ಆದೇಶ ಮಾಡಲಾಗಿದೆ. ಸರ್ಕಾರಿ ಆದೇಶಗಳಂತೆ ಶಾಲಾ ಶಿಕ್ಷಣ ಇಲಾಖೆ, ಆಯುಕ್ತರು ಮಾಡಿರುವ ಆದೇಶದಲ್ಲಿ ಸಲ್ಲಿಸಬೇಕಾಗಿರುವ ಎಲ್ಲ ದಾಖಲಾತಿಗಳನ್ನು 2018ರ ಹಿಂದೆ ಪ್ರಾರಂಭವಾಗಿ ನಡೆಯುತ್ತಿರುವ ಶೇಕಡ 80 ರಷ್ಟು ಅನುದಾನಿತ, ಅನುದಾನ ರಹಿತ ಶಾಲೆಗಳು ಸಲ್ಲಿಸಲು ಸಾಧ್ಯವಾಗುವುದಿಲ್ಲ. ಈ ಆದೇಶಗಳಿಂದ ಶಾಲಾ ಕಾಲೇಜುಗಳ ಆಡಳಿತ ಮಂಡಳಿಯವರು ಲಕ್ಷಾಂತರ ರೂಗಳನ್ನು ಲೋಕೋಪಯೋಗಿ ಇಲಾಖೆ, ಅಗ್ನಿಶಾಮಕ ಇಲಾಖೆ ಹಾಗು ಇನ್ನಿತರೆ ಹಲವಾರು ಇಲಾಖೆಯವರಿಗೆ ಲಂಚ ನೀಡಿ ಮಾಡಿಸಬೇಕಾದಂತೆ ಪರಿಸ್ಥಿತಿ ನಿರ್ಮಾಣವಾಗಿದೆ. ಇಲ್ಲದಿದ್ದರೆ ನೂರಾರು ಶಾಲೆಗಳನ್ನು ಮುಚ್ಚಬೇಕಾದ ಪರಿಸ್ಥಿತಿ ನಿರ್ಮಾಣವಾಗುತ್ತದೆ ಹಾಗು ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳ ಶಿಕ್ಷಣಕ್ಕೆ ತೊಂದರೆಯಾಗುತ್ತದೆ. ಆದ್ದರಿಂದ ಸರ್ಕಾರದ ಆದೇಶ : ಇಡಿ/709/ಪಿಜಿಸಿ/2017, ದಿನಾಂಕ:07-03-2018, ಇಡಿ/709/ಪಿಜಿಸಿ/2017, ದಿನಾಂಕ:08-03-2018 ಇನ್ನಿತರೆ ಆದೇಶದಲ್ಲಿರುವ ನಿಯಮಗಳನ್ನು 2018 ಕ್ಕಿಂತ ಹಿಂದೆ ಪ್ರಾರಂಭವಾಗಿರುವ ಖಾಸಗಿ ಅನುದಾನಿತ/ಅನುದಾನರಹಿತ ಶಾಲಾ ಕಾಲೇಜುಗಳಿಗೆ ಅನ್ವಯಿಸದೆ ಕೈಬಿಟ್ಟು ವಿನಾಯಿತಿ ನೀಡಿ ಮಾನ್ಯತೆ ನವೀಕರಣದ ನಿಯಮಗಳನ್ನು ಸಡಿಲಗೊಳಿಸಿ ಆದೇಶ ಮಾಡಬೇಕೆಂಬ ಬಗ್ಗೆ.

**ಉತ್ತರ**:

ಮಾನ್ಯ ಸರ್ವೋಚ್ಚ ನ್ಯಾಯಾಲಯವು ರಿಟ್ ಪಿಟಿಷನ್ (ಸಿವಿಲ್) ಸಂಖ್ಯೆ:483/2004 ರ ಪ್ರಕರಣಕ್ಕೆ ದಿನಾಂಕ:-13-04-2009ರಂದು ನೀಡಿರುವ ತೀರ್ಪಿನಲ್ಲಿ ಪ್ಯಾರಾ 40(iv) ರಲ್ಲಿ ಎಲ್ಲಾ ಶಾಲೆಗಳು ಮಾನ್ಯತೆ/ ಅಫಿಲಿಯೇಷನ್ ಪಡೆಯುವಾಗ National Building Code 2005 ರ ಅನ್ವಯ ಕಟ್ಟಡ ಸುರಕ್ಷತೆ ಮತ್ತು ಅಗ್ನಿ ಸುರಕ್ಷತೆ ಹೊಂದಿರುವ ಬಗ್ಗೆ ಖಚಿತಪಡಿಸಿಕೊಳ್ಳುವುದನ್ನು ಕಡ್ಡಾಯಗೊಳಿಸಿ ಆದೇಶಿಸಲಾಗಿದೆ. ಸದರಿ ಪ್ರಮಾಣ ಪತ್ರಗಳನ್ನು ನೀಡುವಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಕಾಲ-ಕಾಲಕ್ಕೆ ತಪಾಸಣೆ ನಡೆಸಿ ಸುರಕ್ಷತಾ ಪ್ರಮಾಣ ಪತ್ರಗಳನ್ನು ನೀಡುವಂತೆ ಸ್ಪಷ್ಟ ನಿರ್ದೇಶನ ನೀಡಲಾಗಿರುತ್ತದೆ.

ಮಾನ್ಯ ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದಂತೆ ಮಕ್ಕಳ ಸುರಕ್ಷತೆಯ ಅಂಶಗಳನ್ನು ಒಳಗೊಂಡಂತೆ ನಿಯಮಗಳನ್ನು ಪರಿಷ್ಕರಿಸಿ ಸರ್ಕಾರದ ಅಧಿಸೂಚನೆ ಇಡಿ 709 ಪಿಜಿಸಿ 2017 ದಿನಾಂಕ: 08.03.2018 ಅಧಿಸೂಚನೆ-1 ನ್ನು ಹೊರಡಿಸಲಾಗಿದೆ. ಸದರಿ ನಿಯಮಗಳಂತೆ ಎಲ್ಲಾ ಖಾಸಗಿ ಶಾಲೆಗಳು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರಗಳಿಂದ ಪ್ರಮಾಣ ಪತ್ರಗಳನ್ನು ಪಡೆಯಲು ಹಾಗೂ ನೊಂದಣಿ ಮತ್ತು ಮಾನ್ಯತೆ ಕೋರಿ ಪ್ರಸ್ತಾವನೆ ಸಲ್ಲಿಸುವ ಸಂದರ್ಭದಲ್ಲಿ ದಾಖಲೆಗಳನ್ನು ಸಲ್ಲಿಸಲು ತಿಳಿಸಲಾಗಿದೆ.

ಸರ್ಕಾರದ ಅಧಿಸೂಚನೆ ಇಡಿ 709 ಪಿಜಿಸಿ 2017 ದಿನಾಂಕ: 08.03.2018 ಅಧಿಸೂಚನೆ-1 ಯಂತೆ <u>ಶಾಲಾ ನೊಂದಣಿಗೆ ನಿಗದಿಪಡಿಸಿರುವ ಪ್ರಮುಖ ಮಾನದಂಡಗಳು:</u>

- ತರಗತಿ ಕೊಠಡಿಯಲ್ಲಿ ಪ್ರತಿ ವಿದ್ಯಾರ್ಥಿಗೆ ಕನಿಷ್ಠ 01 ಚ.ಮೀ. ಸ್ಥಳಾವಕಾಶ ಲಭ್ಯತೆ.
- ಶಾಲೆಯ ಹೆಸರಿನಲ್ಲಿ ಸ್ವಂತ ಅಥವಾ 30 ವರ್ಷಗಳಿಗೆ ನೊಂದಾಯಿತ ಲೀಸ್ ಡೀಡ್ ಹೊಂದಿದ ಶೈಕ್ಷಣಿಕ ಉದ್ದೇಶಕ್ಕೆ ಪರಿವರ್ತಿತ ನಿವೇಶನ
- ಕಟ್ಟಡ ಸದೃಢತೆ ಪ್ರಮಾಣಪತ್ರ, ಅಗ್ನಿ ಸುರಕ್ಷತೆ ಸಮಾಪನ ಪತ್ರ, ಮತ್ತು ಅನುಮೋದಿತ ಕಟ್ಟಡ ನಕ್ಷೆಗಳನ್ನು ಖಾಸಗಿ ಶಾಲೆಗಳ ಪ್ರಥಮ ಮಾನ್ಯತೆ /ಮಾನ್ಯತೆ ನವೀಕರಣಕ್ಕೆ ಆನ್‌ಲೈನ್ ನಲ್ಲಿ SATS ಮೂಲಕ ಅರ್ಜಿ ಸಲ್ಲಿಸುವಾಗ ಇಂದೀಕರಿಸಲು ತಿಳಿಸಲಾಗಿರುತ್ತದೆ.

ಎಲ್ಲಾ ಖಾಸಗಿ ಶಾಲೆಗಳು ಜೂನ್ 1995 ರಲ್ಲಿ ಜಾರಿಗೆ ಬಂದಿರುವ ಕರ್ನಾಟಕ ಶಿಕ್ಷಣ ಕಾಯ್ದೆ-1983ರ ಸೆಕ್ಷನ್- 30 ಮತ್ತು 31 ರಂತೆ ನೊಂದಣಿ ಮತ್ತು ಅಸ್ತಿತ್ವದಲ್ಲಿರುವ ಖಾಸಗಿ ಅನುದಾನರಹಿತ ಶಾಲೆಗಳು ಸೆಕ್ಷನ್-32ರಂತೆ ಉನ್ನತೀಕರಿಸಿದ ತರಗತಿಗಳನ್ನು ಪ್ರಾರಂಭಿಸಲು ಅನುಮತಿ ಪಡೆಯುವುದು ಹಾಗೂ ಕಾಯ್ದೆಯ ಸೆಕ್ಷನ್-36 ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯಿದೆ-2009ರಡಿ ರೂಪಿಸಲಾಗಿರುವ ಈ ಕೆಳಕಂಡ ನಿಯಮಗಳಂತೆ ನಿಗದಿಪಡಿಸಿದ ಎಲ್ಲಾ ಮಾನದಂಡಗಳನ್ನು ಪೂರೈಸಿ ಮಾನ್ಯತೆ ಪಡೆಯುವುದು ಕಡ್ಡಾಯವಾಗಿರುತ್ತದೆ.

1. THE KARNATAKA EDUCATIONAL INSTITUTIONS (CLASSIFICATION, REGULATION AND PRESCRIPTION OF CURRICULA ETC.,) RULES, 1995
2. (THE KARNATAKA EDUCATIONAL INSTITUTIONS (RECOGNITION OF PRIMARY AND SECONDARY SCHOOLS) RULES, 1999
3. ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ನಿಯಮಗಳು-2012

ಖಾಸಗಿ ಅನುದಾನಿತ ಮತ್ತು ಅನುದಾನರಹಿತ ಶಾಲೆಗಳಲ್ಲಿ ಕಟ್ಟಡ ಸುರಕ್ಷತೆ ಮತ್ತು ಅಗ್ನಿ ಸುರಕ್ಷತೆ ಪ್ರಮಾಣ ಪತ್ರಗಳನ್ನು ಪಡೆಯುವುದರೊಂದಿಗೆ ಸುರಕ್ಷತಾ ಮಾನದಂಡಗಳನ್ನು ನಿಗದಿಪಡಿಸಿ ಹೊರಡಿಸಲಾಗಿದ್ದ ದಿನಾಂಕ:10.11.2020ರ ಸರ್ಕಾರದ ಸುತ್ತೋಲೆ ಸಂಖ್ಯೆ:ಇಪಿ 46 ಎಸ್‌ಹೆಚ್‌ಹೆಚ್ 2020 ಅನ್ನು ಪ್ರಶ್ನಿಸಿ 2017ರ ಪೂರ್ವದಲ್ಲಿ ಪ್ರಾರಂಭವಾದ ಖಾಸಗಿ ಶಾಲೆಗಳ ಆಡಳಿತ ಮಂಡಳಿಗಳು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ WP No.-5380/2022ನ್ನು ದಾಖಲಿಸಿದ್ದು, ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ದಿನಾಂಕ:14-11-2022 ರ ತೀರ್ಪಿನಲ್ಲಿ 2017-18ರ ಪೂರ್ವದಲ್ಲಿ ಪ್ರಾರಂಭವಾದ ಶಾಲೆಗಳ ಮಾನ್ಯತೆ ನವೀಕರಣಕ್ಕೆ ಸಂಬಂಧಿಸಿದಂತೆ ಸುರಕ್ಷತೆಯ ಕ್ರಮಗಳನ್ನು ವಿವರಿಸಿರುವ ನಿಯಮ-5ಎ ಅನ್ನು ರದ್ದುಪಡಿಸಲಾಗಿದೆ.

ಸದರಿ ತೀರ್ಪಿನಲ್ಲಿ ದಿನಾಂಕ:06-06-2022ರಂದು ಆಯುಕ್ತರ ಕಛೇರಿಯಿಂದ ಹೊರಡಿಸಿದ ಸುತ್ತೋಲೆಯನ್ನು ಪ್ರಶ್ನಿಸಬಹುದೆಂದು ಉಲ್ಲೇಖಿಸಲಾಗಿದೆ. ದಿನಾಂಕ:06.06.2022 ರ ಸುತ್ತೋಲೆಯಲ್ಲಿ ಕಟ್‌ಟಡ ಸದೃಢತೆ ಪ್ರಮಾಣ ಪತ್ರ ಮತ್ತು ಅಗ್ನಿ ಸುರಕ್ಷತಾ ಸಮಾಪನ ಪತ್ರಗಳನ್ನು ಪಡೆಯಲು ಅನುಸರಿಸಬೇಕಾದ ವಿಧಾನಗಳ ಬಗ್ಗೆ ಸಂಬಂಧಿಸಿದ ಇಲಾಖೆಗಳು ಹೊರಡಿಸಿದ ಸರ್ಕಾರದ ಆದೇಶಗಳಂತೆ ಕ್ರಮವಹಿಸಲು ಸೂಚನೆ ನೀಡಲಾಗಿರುತ್ತದೆ. WP No.5380/2022 ರ ತೀರ್ಪಿನ ವಿರುದ್ಧ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಇಲಾಖೆಯು ರಿಟ್ ಅಪೀಲು ಸಂಖ್ಯೆ-100/2024 ಅನ್ನು ದಾಖಲಿಸಿದ್ದು ಸದರಿ ಪ್ರಕರಣವು ವಿಚಾರಣಾ ಹಂತದಲ್ಲಿದೆ.

ಖಾಸಗಿ ಶಾಲಾ ಆಡಳಿತ ಮಂಡಳಿಗಳ ಮನವಿ ಮತ್ತು ನ್ಯಾಯಾಲಯ ಪ್ರಕರಣಗಳು ಬಾಕಿ ಇದ್ದ ಕಾರಣದಿಂದ ಸರ್ಕಾರದ ಅನುಮೋದನೆಯಂತೆ 2017-18ರ ಪೂರ್ವದಲ್ಲಿ ಪ್ರಾರಂಭವಾದ ಶಾಲೆಗಳಿಗೆ

2020-21ನೇ ಸಾಲಿನಿಂದ 2024-25ನೇ ಸಾಲಿನವರೆಗೆ ಪ್ರತಿ ವರ್ಷವೂ ಶೈಕ್ಷಣಿಕ ಉದ್ದೇಶಕ್ಕೆ ಭೂಪರಿವರ್ತನೆ, ಅಗ್ನಿ ಸುರಕ್ಷತೆ ಸಮಾಪನ ಪತ್ರ, ಕಟ್ಟಡ ಸದೃಢತೆ ಪ್ರಮಾಣಪತ್ರ ಮತ್ತು ಅನುಮೋದಿತ ಕಟ್ಟಡ ನಕ್ಷೆಗಳನ್ನು ಮುಂದಿನ ಶೈಕ್ಷಣಿಕ ವರ್ಷದಲ್ಲಿ ಸಕ್ಷಮ ಪ್ರಾಧಿಕಾರದಿಂದ ಪ್ರಮಾಣ ಪತ್ರ ಪಡೆದು ಸಲ್ಲಿಸುವ ಬಗ್ಗೆ ಮುಚ್ಚಳಿಕೆ ಪತ್ರ ಪಡೆದು ಷರತ್ತುಬದ್ಧವಾಗಿ ಮಾನ್ಯತೆ ನವೀಕರಿಸಲಾಗಿದೆ.

ಶಾಲಾ ಆಡಳಿತ ಮಂಡಳಿಗಳ ಮನವಿಯಂತೆ ಖಾಸಗಿ ಶಾಲಾ ನೊಂದಣಿ, ಮಾನ್ಯತೆಗೆ ಸಂಬಂಧಿಸಿದ ಆನ್‌ಲೈನ್ ತಂತ್ರಾಂಶಗಳನ್ನು ಮಾರ್ಚ್-2023ರಿಂದ ಸರಳೀಕರಿಸಿ ಸಕಾಲ ಸೇವೆಯಡಿ ತರಲಾಗಿದ್ದು, ಶಾಲಾ ಭೇಟಿಗಳನ್ನು ಶೇ.5 ರಷ್ಟು ಶಾಲೆಗಳಿಗೆ ಮಾತ್ರ ನಿಗದಿಪಡಿಸಲಾಗಿದೆ.

ಖಾಸಗಿ ಶಾಲಾ ಆಡಳಿತ ಮಂಡಳಿಗಳ ಮನವಿಯಂತೆ ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ದಿನಾಂಕ:11.08.2023 ರ ಸಭೆಯ ಸೂಚನೆಗಳು ಮತ್ತು ದಿನಾಂಕ:17.08.2023ರಂದು ಮಾನ್ಯ ಪ್ರಧಾನ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭಾ ನಡವಳಿಯಂತೆ ಕಾಯ್ದೆ ಮತ್ತು ನಿಯಮಾನುಸಾರ ನಿಗದಿಪಡಿಸಿದ ಎಲ್ಲಾ ಮಾನದಂಡಗಳನ್ನು ಪೂರೈಸಿದ ಶಾಲೆಗಳಿಗೆ ಪ್ರಥಮ ಬಾರಿಗೆ 10 ವರ್ಷಗಳಿಗೆ ಹಾಗೂ ಎರಡನೆ ಬಾರಿಗೆ ಶಾಶ್ವತವಾಗಿ ಮಾನ್ಯತೆ ನವೀಕರಿಸಲು ನಿಯಮಗಳನ್ನು ತಿದ್ದುಪಡಿ ಮಾಡಿ ದಿನಾಂಕ:26.08.2024ರಂದು ಸರ್ಕಾರದ ಅಧಿಸೂಚನೆ ಹೊರಡಿಸಲಾಗಿದೆ.

ಖಾಸಗಿ ಶಾಲಾ ಆಡಳಿತ ಮಂಡಳಿಗಳ ಮನವಿಗಳಂತೆ, ಪ್ರಥಮ ಮಾನ್ಯತೆ ಹಾಗೂ ಮಾನ್ಯತೆ ನವೀಕರಣ ಪಡೆಯಲಿ SATS ಪೋರ್ಟಲ್ ಮೂಲಕ ಸಲ್ಲಿಸಬೇಕಾಗಿದ್ದ ದಾಖಲೆಗಳನ್ನು ಸರಳೀಕರಿಸಿ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರು ದಿನಾಂಕ:08.01.2025 ರಂದು ಸುತ್ತೋಲೆ ಹೊರಡಿಸಿದ್ದು, ಅದರಂತೆ 48 ದಾಖಲೆಗಳಿಂದ 25 ದಾಖಲೆಗಳಿಗೆ ಕಡಿತಗೊಳಿಸಿದ್ದು, ಇದರಲ್ಲಿ 04 ದಾಖಲೆಗಳು ಒಂದು ಬಾರಿಗೆ ಮಾತ್ರ (ಶಾಶ್ವತ ದಾಖಲೆಗಳು) ಸಲ್ಲಿಸಬೇಕಾಗಿದ್ದು, 03 ದಾಖಲೆಗಳು ಆಯಾ ಇಲಾಖೆಯಿಂದ ಪಡೆದ ಪತ್ರಗಳು ಮತ್ತು 12 ದಾಖಲೆಗಳು ಶಾಲಾ ಆಡಳಿತ ಮಂಡಳಿಯು ಸಲ್ಲಿಸಬೇಕಾದ ದೃಢೀಕರಣ ಪತ್ರಗಳಾಗಿದ್ದು, 03 ಅಥವಾ 04 ದಾಖಲೆಗಳು ಹಣಕಾಸಿಗೆ ಸಂಬಂಧಿಸಿದ ದಾಖಲೆಗಳಾಗಿರುತ್ತದೆ.

ಖಾಸಗಿ ಶಾಲಾ ಆಡಳಿತ ಮಂಡಳಿಗಳ ಮನವಿಯಂತೆ ಮಾನ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ದಿನಾಂಕ:06.09.2024ರಂದು ನಡೆದ ಸಭೆಯ ನಡವಳಿಯಂತೆ ಶಾಲಾ ಕಟ್ಟಡ ಸದೃಢತೆಗೆ ಸಂಬಂಧಿಸಿದಂತೆ ಲೋಕೋಪಯೋಗಿ ಇಲಾಖೆಯು ಕಟ್ಟಡ ಸದೃಢತೆ ಪ್ರಮಾಣ ಪತ್ರದ ಅವಧಿಯನ್ನು ಪರಿಷ್ಕರಿಸಿ ಸುತ್ತೋಲೆ ಹೊರಡಿಸಿರುತ್ತದೆ.

ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಿಸಿದ WP No.5380/2022 ಪ್ರಕರಣದ ದಿನಾಂಕ:14.11.2022ರ ತೀರ್ಪಿನಲ್ಲಿ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ ಇವರ ದಿನಾಂಕ:06.06.2022ರ ಸುತ್ತೋಲೆಯನ್ನು ಪ್ರಶ್ನಿಸಬಹುದೆಂದು ಉಲ್ಲೇಖಿಸಿದ್ದು, ಅದರಂತೆ, ಖಾಸಗಿ ಶಾಲಾ ಆಡಳಿತ ಮಂಡಳಿಗಳು ಸದರಿ ಸುತ್ತೋಲೆಯನ್ನು ಪ್ರಶ್ನಿಸಿ ಮಾನ್ಯ ಉಚ್ಚ ನ್ಯಾಯಾಲಯ, ಬೆಂಗಳೂರು ಇಲ್ಲಿ ದಾಖಲಿಸಿದ್ದ WP NO.23653/2024ರ ದಿನಾಂಕ: 02.12.2024 ರ ತೀರ್ಪಿನಲ್ಲಿ ಖಾಸಗಿ ಶಾಲೆಗಳಿಗೆ ಸಂಬಂಧಿಸಿದಂತೆ ಕಂಡಿಕೆ-24ರಲ್ಲಿ ಎಲ್ಲಾ ಖಾಸಗಿ ಶಾಲೆಗಳು ಮುಂದಿನ ಶೈಕ್ಷಣಿಕ ಸಾಲಿನಿಂದ ಅನ್ವಯಿಸುವ ಎಲ್ಲಾ ಕಾಯ್ದೆ, ಬೈಲಾ ಮತ್ತು ನಿಯಮಗಳನ್ನು ಕಡ್ಡಾಯವಾಗಿ ಪಾಲಿಸುವುದು ಎಂದು ನಿರ್ದೇಶನ ನೀಡಲಾಗಿದೆ.

ದಿನಾಂಕ:24.07.2025ರಂದು ಸರ್ಕಾರದ ಅಪರ ಕಾರ್ಯದರ್ಶಿಗಳು, ಒಳಾಡಳಿತ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಮಾನ್ಯ ವಿಧಾನ ಪರಿಷತ್ ಸದಸ್ಯರ ಉಪಸ್ಥಿತಿಯಲ್ಲಿ ನಡೆದ ಸಭೆಯಲ್ಲಿ 2017-18ರ ಪೂರ್ವದಲ್ಲಿ ಪ್ರಾರಂಭವಾಗಿರುವ ಖಾಸಗಿ ಶಾಲೆಗಳಿಗೆ ಸಂಬಂಧಿಸಿದಂತೆ ಭೂ ಪರಿವರ್ತನೆ, ಅಗ್ನಿ ಸುರಕ್ಷತೆ ಸಮಾಪನ ಪತ್ರ, ಕಟ್ಟಡ ಸದೃಢತೆ ಪ್ರಮಾಣಪತ್ರ ಮತ್ತು ಅನುಮೋದಿತ ಕಟ್ಟಡ ನಕ್ಷೆಗಳನ್ನು ನೀಡುವ

ಸಂಬಂಧ ಆಯಾ ಇಲಾಖೆಗಳ ಮುಖ್ಯಸ್ಥರೊಂದಿಗೆ ಚರ್ಚಿಸಲಾಗಿದೆ. ಸದರಿ ಸಭೆಯಲ್ಲಿ ಅಗ್ನಿ ಶಾಮಕ ಇಲಾಖೆಯು ಇನ್ನು ಮುಂದೆ ಆನ್ ಲೈನ್ ಮೂಲಕ ಅಗ್ನಿ ಸುರಕ್ಷತಾ ಸಮಾಪನಾ ಪತ್ರಗಳನ್ನು ಆನ್‌ಲೈನ್ ಮೂಲಕ ನೀಡಲು ಹಾಗೂ ಆನ್‌ಲೈನ್ ಅಪ್ಲಿಕೇಷನ್ ಪೋರ್ಟಲ್ ವಿನ್ಯಾಸಗೊಳಿಸುವವರೆಗೂ ಸೇವಾಸಿಂಧು ಪೋರ್ಟಲ್ ಮೂಲಕ ನೀಡಲು ತೀರ್ಮಾನಿಸಲಾಯಿತು. ಶಾಲಾ ಕಟ್ಟಡ ಸುರಕ್ಷತೆ, ಅಗ್ನಿ ಸುರಕ್ಷತೆಗೆ ಸಂಬಂಧಿಸಿದಂತೆ ಆಯುಕ್ತರು ಶಾಲಾ ಶಿಕ್ಷಣ ಇಲಾಖೆ, ಅಗ್ನಿ ಶಾಮಕ ಇಲಾಖೆ ಮತ್ತು ಲೋಕೋಪಯೋಗಿ ಇಲಾಖಾ ಅಧಿಕಾರಿಗಳ ಸಮಿತಿ ರಚಿಸಿ ಈ ಸಂಬಂಧ ವರದಿ ನೀಡಲು ತಿಳಿಸಲಾಗಿದೆ.

ಖಾಸಗಿ ಶಾಲೆಗಳ ಮಾನ್ಯತೆಗೆ ಅಗತ್ಯವಾದ ದಾಖಲೆಗಳನ್ನು ನೀಡುತ್ತಿರುವ ಕಂದಾಯ ಇಲಾಖೆ, ಗೃಹ ಇಲಾಖೆ, ಪಂಚಾಯತ್ ರಾಜ್ ಮತ್ತು ಗ್ರಾಮೀಣಾಭಿವೃದ್ಧಿ ಇಲಾಖೆ, ನಗರಾಭಿವೃದ್ಧಿ ಇಲಾಖೆ, ಬಿ.ಬಿ.ಎಂ.ಪಿ., ನೊಂದಣಿ ಮತ್ತು ಮುದ್ರಾಂಕ ಇಲಾಖೆ, ಸಹಕಾರ ಇಲಾಖೆ ಹಾಗೂ ಕಾರ್ಮಿಕ ಇಲಾಖೆಗಳ ಮುಖ್ಯಸ್ಥರಿಗೆ ತಮ್ಮ ಇಲಾಖೆಯ ಮಾಹಿತಿಯನ್ನು ಶಾಲಾ ಶಿಕ್ಷಣ ಇಲಾಖೆಯ ಪೋರ್ಟಲ್ SATS ಗೆ API ಹಂಚಿಕೊಳ್ಳಲು ಅರೆ ಸರ್ಕಾರಿ ಪತ್ರಮುಖೇನ ಕೋರಲಾಗಿದ್ದು, ಈ ಬಗ್ಗೆ ಮಾನ್ಯ ಉಚ್ಚ ನ್ಯಾಯಾಲಯಕ್ಕೆ ಪ್ರತಿ ತಿಂಗಳು ತೆಗೆದುಕೊಂಡ ಕ್ರಮದ ಕುರಿತು ಪ್ರಮಾಣಪತ್ರ ಸಲ್ಲಿಸಲಾಗುತ್ತಿದೆ.

ದಿನಾಂಕ: 01.12.2025 ರಂದು ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಕಂದಾಯ ಇಲಾಖೆ, ಗೃಹ ಇಲಾಖೆ, ಪಂಚಾಯತ್ ರಾಜ್ ಮತ್ತು ಗ್ರಾಮೀಣಾಭಿವೃದ್ಧಿ ಇಲಾಖೆ, ನಗರಾಭಿವೃದ್ಧಿ ಇಲಾಖೆ, ಬಿ.ಬಿ.ಎಂ.ಪಿ., ನೊಂದಣಿ ಮತ್ತು ಮುದ್ರಾಂಕ ಇಲಾಖೆ, ಸಹಕಾರ ಇಲಾಖೆ ಹಾಗೂ ಕಾರ್ಮಿಕ ಇಲಾಖೆಗಳ ಮುಖ್ಯಸ್ಥರೊಂದಿಗೆ ಸಭೆ ನಡೆಸಿ ಖಾಸಗಿ ಶಾಲೆಗಳಿಗೆ ನೀಡುವ ಪ್ರಮಾಣಪತ್ರಗಳನ್ನು ನೀಡುವ ವ್ಯವಸ್ಥೆಯನ್ನು ಸರಳೀಕರಿಸಿ ಆನ್ ಲೈನ್ ಸೇವೆ ಮೂಲಕ ನೀಡಲು ಪೋರ್ಟಲ್ ಅಭಿವೃದ್ಧಿಪಡಿಸಲು ಹಾಗೂ ಪೋರ್ಟಲ್ ಅಭಿವೃದ್ಧಿಗೊಳ್ಳುವವರೆಗೂ ಸಕಾಲ ಸೇವೆಯಡಿ ಸೇವಾಸಿಂಧು ಪೋರ್ಟಲ್ ಮೂಲಕ ಸೇವೆ ನೀಡಲು ತಿಳಿಸಲಾಗಿದೆ. ಈ ರೀತಿಯಲ್ಲಿ ನೀಡಲಾಗುವ ದಾಖಲೆಗಳನ್ನು API ಮೂಲಕ SATS ಗೆ ನೀಡಲು ತಿಳಿಸಲಾಯಿತು

ಮಾನ್ಯ ವಿಧಾನ ಪರಿಷತ್ ಸದಸ್ಯರು ಮತ್ತು ಖಾಸಗಿ ಶಾಲಾ ಆಡಳಿತ ಮಂಡಳಿಗಳ ಸಂಘದ ಪ್ರತಿನಿಧಿಗಳೊಂದಿಗೆ ದಿನಾಂಕ: 05.12.2025 ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಸಭೆ ನಡೆಸಿದ್ದು, ಖಾಸಗಿ ಶಾಲೆಗಳಿಗೆ ಮಾನ್ಯತೆ ಪಡೆಯುವ ಸಂಬಂಧ ಖಾಸಗಿ ಆಡಳಿತ ಮಂಡಳಿಗಳು ಪ್ರಸ್ತಾಪಿಸಿದ ಸಮಸ್ಯೆಗಳು / ಬೇಡಿಕೆಗಳ ಬಗ್ಗೆ ಚರ್ಚಿಸಲಾಗಿದ್ದು, ಈ ಸಂಬಂಧ ಕಾಯ್ದೆ, ನಿಯಮಗಳು ಮತ್ತು ಮಾನ್ಯ ನ್ಯಾಯಾಲಯಗಳ ನಿರ್ದೇಶನಗಳ ಹಿನ್ನೆಲೆಯಲ್ಲಿ ಪರಿಶೀಲಿಸಲಾಗುತ್ತಿದೆ.

**ಸಂಖ್ಯೆ: ಇಪಿ 389 ಪಿಜಿಸಿ 2025**

**(ಎಸ್.ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು